All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

11.06.2025 6.40 P.M.

<><><><>

ಮುಖ್ಯಾಂಶಗಳು :

- ಬಳ್ಳಾರಿ ಚಿಕ್ಕಜಾಜೂರು ದ್ವಿಮುಖ ರೈಲುಮಾರ್ಗ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
- ಕುಸುಮ್-ಸಿ ಯೋಜನೆಯಡಿ ರಾಜ್ಯದಲ್ಲಿ ೨ ಸಾವಿರದ ೪೦೦ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವ ಗುರಿ
- ಆರ್.ಸಿ.ಬಿ. ಆಟಗಾರರ ಸನ್ಮಾನ ಸಮಾರಂಭಕ್ಕೆ ತಾವೇ ರಾಜ್ಯಪಾಲರನ್ನು ಆಹ್ವಾನಿಸಿದ್ದು - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
- ಹೇಮಾವತಿ ಲಿಂಕ್ ಕೆನಾಲ್ ಎಕ್ಸ್‌ಪ್ರೆಸ್ ಕಾಮಗಾರಿ ಸ್ಥಗಿತಗೊಳಿಸುವಂತೆ ವಿ.ಸೋಮಣ್ಣ ಅಧಿಕಾರಿಗಳಿಗೆ ಸೂಚನೆ
- ಬೆಂಗಳೂರು ನಗರ ವಿಶ್ವವಿದ್ಯಾಲಯದ ೭೪ ವಿದ್ಯಾರ್ಥಿಗಳಿಗೆ ರಾಜ್ಯಪಾಲರಿಂದ ಚಿನ್ನದ ಪದಕ ಪ್ರದಾನ

<><><><>

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿ ಭಾರತೀಯ ರೈಲ್ವೆ ಜಾಲದಾದ್ಯಂತ ೬ ಸಾವಿರದ ೪೦೫ ಕೋಟಿ ರೂಪಾಯಿಗಳ ಹೂಡಿಕೆಯ ಎರಡು ಬಹು-ಪಥ ಯೋಜನೆಗಳಿಗೆ ಅನುಮೋದನೆ ನೀಡಿದೆ. ಎರಡನೇ ಯೋಜನೆಯು ಕರ್ನಾಟಕದ ಬಳ್ಳಾರಿ ಮತ್ತು ಚಿತ್ರದುರ್ಗ ಜಿಲ್ಲೆಗಳು ಮತ್ತು ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಮೂಲಕ ಹಾದುಹೋಗುವ ೧೮೫ ಕಿ.ಮೀ. ಬಳ್ಳಾರಿ-ಚಿಕ್ಕಜಾಜೂರು ರೈಲು ಮಾರ್ಗ ಡಬ್ಲಿಂಗ್ ಕಾರ್ಯ ಒಳಗೊಂಡಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.  ಈ ಮಾರ್ಗವು ಮಂಗಳೂರು ಬಂದರನ್ನು ಸಿಕಂಧರಬಾದಿಗೆ ಸಂಪರ್ಕಿಸಲಿದೆ. ಕಬ್ಬಿಣದ ಅದಿರು, ಕಲ್ಲಿದ್ದಲು, ರಸಗೊಬ್ಬರ, ಪೆಟ್ರೋಲಿಯಂ ಉತ್ಪನ್ನಗಳನ್ನು ಸಾಗಿಸಲು ನಿರ್ಣಾಯಕವಾಗಿದೆ.

<><><><>

ರಾಜ್ಯದಲ್ಲಿ ಪ್ರಧಾನಮಂತ್ರಿ ಕುಸುಮ್-ಸಿ ಯೋಜನೆಯಡಿ ೨ಸಾವಿರದ ೪೦೦ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವ ಗುರಿ ಹೊಂದಲಾಗಿದೆ ಎಂದು  ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲ್ಲೂಕು ತೊಂಡೇಬಾವಿ ಗ್ರಾಮದಲ್ಲಿ

ಪ್ರಧಾನ ಮಂತ್ರಿ  ಕುಸುಮ್ ಸಿ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಅವರು ರೈತರ ಕೃಷಿ ಪಂಪ್ ಸೆಟ್ ಗಳಿಗೆ ಹಗಲು ಹೊತ್ತಿನಲ್ಲಿ ತ್ರಿ - ಫೇಸ್‌ನಲ್ಲಿ ೮ ಗಂಟೆ ವಿದ್ಯುತ್ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.  ಪ್ರಸ್ತುತ ರಾಜ್ಯದಲ್ಲಿ ೩೫ ಸಾವಿರ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದ್ದು, ೨೦೩೦ ರ ವೇಳೆಗೆ ೬೦ ಸಾವಿರ ಮೆಗಾವ್ಯಾಟ್ ಉತ್ಪಾದನೆ ಮಾಡುವ ಗುರಿ ಹೊಂದಲಾಗಿದೆ ಎಂದು ತಿಳಿಸಿದ್ದಾರೆ. ರೈತರ ಪಂಪ್ ಸೆಟ್ ಗಳಿಗೆ ನೀಡುವ ಸಬ್ಸಿಡಿ ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ ಎಂದು ಭರವಸೆ ನೀಡಿದ್ದಾರೆ. ಇದೇ ವೇಳೆ ಭಾರತದ ವಿವಿಧ ಲಿಪಿಗಳನ್ನು ಪರಿಚಯಿಸುವ ೧.೫ ಕೋಟಿ ವೆಚ್ಚದ ಲಿಪಿಮನೆ ಕಾಮಗಾರಿಗೆ ಮುಖ್ಯಮಂತ್ರಿಗಳು ಡಿಜಿಟಲ್ ಮೂಲಕ ಚಾಲನೆ ನೀಡಿದರು.

<><><><>

ವಿಧಾನಸೌಧದಲ್ಲಿ ನಡೆದ ಆರ್.ಸಿ.ಬಿ ಆಟಗಾರರ ಸನ್ಮಾನ ಸಮಾರಂಭಕ್ಕೆ ರಾಜ್ಯಪಾಲರನ್ನು ನಾನೇ ಆಹ್ವಾನಿಸಿದ್ದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಗೌರಿಬಿದನೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜಕೀಯ ಕಾರ್ಯದರ್ಶಿಯಾಗಿದ್ದ ಗೋವಿಂದರಾಜು ಅವರು ರಾಜ್ಯ ಪಾಲರಿಗೆ ಕರೆ ಮಾಡಿದ್ದರು. ಈ ವೇಳೆ ತಾವು ಕಾರ್ಯಕ್ರಮಕ್ಕೆ ತೆರಳುತ್ತಿದ್ದು ನೀವು ಬನ್ನಿ ಎಂದು ಆಹ್ವಾನಿಸಿದ್ದೆ ಎಂದು ಹೇಳಿದ್ದಾರೆ.

ಧ್ವನಿ -ಮುಖ್ಯಮಂತ್ರಿ ಸಿದ್ಧರಾಮಯ್ಯ (೧೮ ಸೆಕೆಂಡ್ಸ್)

ಇದೇ ವೇಳೆ, ವಿಧಾನ ಪರಿಷತ್ ಸದಸ್ಯರ ನಾಮನಿರ್ದೇಶನ ವಿಚಾರದಲ್ಲಿ ಯಾವುದೇ ಗೊಂದಲಗಳಿಲ್ಲ ಎಂದು ತಿಳಿಸಿದ್ದಾರೆ. ಮಾವಿಗೆ ಬೆಂಬಲ ಬೆಲೆ ನೀಡುವ ಬಗ್ಗೆ ಕುರಿತಂತೆ ಸಂಪುಟ ಸಭೆಯಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದೆಂದು ಹೇಳಿದ್ದಾರೆ.

<><><><>

ಹೇಮಾವತಿ ಲಿಂಕ್ ಕೆನಾಲ್ ಎಕ್ಸ್ ಪ್ರೆಸ್ ಕಾಮಗಾರಿ ಸ್ಥಗಿತಗೊಳಿಸುವಂತೆ ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಗುಬ್ಬಿ ತಾಲ್ಲೂಕಿನ ಡಿ.ರಾಂಪುರ ಬಳಿ ನಡೆಯುತ್ತಿರುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಹೇಮಾವತಿ ನೀರನ್ನು ರಾಮನಗರಕ್ಕೆ ಹರಿಸುವ ಮೊದಲು ಜಿಲ್ಲೆಗೆ ನಿಗದಿಯಾಗಿರುವ ನೀರಿನ ಪ್ರಮಾಣವನ್ನು ಹೆಚ್ಚಿಸುವಂತೆ ಆಗ್ರಹಿಸಿದ್ದಾರೆ. ಜಿಲ್ಲೆಗೆ ನಿಗದಿಯಾಗಿರುವ ನೀರಿನ ಪ್ರಮಾಣವನ್ನು ಹೆಚ್ಚಿಸುವುದರೊಂದಿಗೆ ಅಕ್ಕ ಪಕ್ಕದ ಕೆರೆಗಳಿಗೂ ನೀರು ಹರಿಸುವಂತೆ ಯೋಜನೆ ರೂಪಿಸಿದರೆ ಕೇಂದ್ರ ಸರ್ಕಾರದಿಂದಲೂ ಅನುದಾನ ಕೊಡಿಸುವುದಾಗಿ ತಿಳಿಸಿದ್ದಾರೆ. ಮುಖ್ಯಮಂತ್ರಿಗಳು, ಹಾಗೂ ಅಧಿಕಾರಿಗಳೊಂದಿಗೆ ಈ ಯೋಜನೆ ಬಗ್ಗೆ  ಚರ್ಚೆ ನಡೆಸಿ ತಾಂತ್ರಿಕ ಅಂಶಗಳ ಬಗ್ಗೆ ತಿಳಿದುಕೊಳ್ಳಲು ಸಭೆ ನಡೆಸುವ ಕುರಿತಂತೆ  ದಿನಾಂಕ ನಿಗದಿ ಪಡಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೈಟ್: ವಿ.ಸೋಮಣ್ಣ, ಕೇಂದ್ರ ಸಚಿವ

<><><><>

ವಿದ್ಯಾವಂತ ಯುವಕರು ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತರಬಹುದು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಬೆಂಗಳೂರು ನಗರ ವಿಶ್ವವಿದ್ಯಾಲಯದ ೪ ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತಾನಾಡಿದ ಅವರು ನಿಮ್ಮ ಕನಸುಗಳನ್ನು ನನಸಾಗಿಸಲು ಶಿಕ್ಷಣವು ಅತ್ಯಂತ ದೊಡ್ಡ ಕೊಡುಗೆಯಾಗಿದೆ ಎಂದು ಹೇಳಿದ್ದಾರೆ. ಸಮಾರಂಭದಲ್ಲಿ ರಾಜ್ಯಪಾಲರು ಒಟ್ಟು ೩೯ಸಾವಿರದ ೭೮೦ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದರು. ಆ ಪೈಕಿ ೬೪ ವಿದ್ಯಾರ್ಥಿಗಳಿಗೆ ಪ್ರಥಮ ರ್‍ಯಾಂಕ್ ಪ್ರಮಾಣ ಪತ್ರ, ಚಿನ್ನದ ಪದಕ ಮತ್ತು ನಗದು ಬಹುಮಾನಗಳನ್ನು ವಿತರಿಸಿದರು. ಸಮಾರಂಭದಲ್ಲಿ ಪಾಟ್ನಾ ಹೈಕೋರ್ಟ್‌ನ ನ್ಯಾಯಮೂರ್ತಿ ಪಿ.ಬಿ. ಬಜಂತ್ರಿ, ವಿಶ್ವವಿದ್ಯಾಲಯದ ಹಂಗಾಮಿ ಕುಲಪತಿ ಕೆ.ಆರ್. ಜಲಜಾ ಭಾಗವಹಿಸಿದ್ದರು.

<><><><>

ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿಯ ಅಂಕಿ ಅಂಶಗಳ ಪರಾಮರ್ಶೆಗಾಗಿ ಮರು ಸಮೀಕ್ಷೆ ನಡೆಸುವ ನಿರ್ಧಾರವನ್ನು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ವಾಗತಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಬಳಿಕ ಇ.ಡಿ., ಐ.ಟಿ., ಸಿಬಿಐನಂತಹ ಸ್ವಾಯತ್ತ ಸಂಸ್ಥೆಗಳನ್ನು ರಾಜಕೀಯ ದುರುದ್ದೇಶಕ್ಕಾಗಿ ದುರುಪಯೋಗ ಪಡಿಸಿಕೊಳ್ಳುತ್ತಿರುವುದು ಜಗಜ್ಜಾಹೀರಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಎಚ್‌ಎಂಟಿ ವಶದಲ್ಲಿರುವ ಅರಣ್ಯ ಭೂಮಿಯನ್ನು ಡಿನೋಟಿಫೈ ಮಾಡಲು ಸಂಪುಟದ ಅನುಮತಿ ಇಲ್ಲದೆ ಅರ್ಜಿ ಸಲ್ಲಿಸಿರುವ ಐ.ಎಫ್.ಎಸ್. ಅಧಿಕಾರಿ ಆರ್. ಗೋಕುಲ್ ಅಮಾನತನ್ನು ಸಚಿವರು ಸಮರ್ಥಿಸಿಕೊಂಡಿದ್ದಾರೆ.

<><><><>

೧೧ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಇದೇ ೨೧ ರಂದು “ಒಂದು ಭೂಮಿ, ಒಂದು ಆರೋಗ್ಯ”ಎಂಬ ಧ್ಯೇಯ ವಾಕ್ಯದೊಂದಿಗೆ ರಾಮನಗರ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ಜಿಲ್ಲೆಯ ಪ್ರವಾಸೋದ್ಯಮ ಉತ್ತೇಜಿಸುವ ಸಲುವಾಗಿ ವಿವಿಧ ಇಲಾಖೆಗಳ ಸಹಯೋಗದಲ್ಲಿ ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಸೂಚಿಸಿದ್ದಾರೆ. ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಯೋಗಾಭ್ಯಾಸ ನಡೆಸಿ ನಂತರ ಶ್ರಮದಾನ, ಸ್ವಚ್ಛತಾ ಅಭಿಯಾನ ಹಾಗೂ ಪ್ರಮುಖವಾಗಿ ಗಿಡಗಳನ್ನು ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

<><><><>

ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಅಣೆಕಟ್ಟು ಬಳಿ ರಾಜ್ಯ ಸರ್ಕಾರ ನಿರ್ಮಿಸಲು ಹೊರಟಿರುವ ಅಮ್ಯೂಸ್ಮೆಂಟ್ ಪಾರ್ಕ್‌ನಿಂದ ಸ್ಥಳೀಯರಿಗೆ ಅನುಕೂಲಕ್ಕಿಂತ ಅನಾನುಕೂಲವೇ ಹೆಚ್ಚಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ತಿಳಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾರ್ಕ್ ನಿರ್ಮಾಣ ಹಾಗೂ ಕಾವೇರಿ ಆರತಿಗೆ ತಮ್ಮ ವಿರೋಧವಿದೆ ಎಂದು

ಸ್ಪಷ್ಟಪಡಿಸಿದ್ದಾರೆ. ಮಾಹಿತಿ ನೀಡದೇ ಕಾವೇರಿ ಆರತಿಗೆ ಸರ್ಕಾರ ಮುಂದಾಗಿದೆ. ಈ ಬಗ್ಗೆ ರೈತರು ನಡೆಸುತ್ತಿರುವ ಹೋರಾಟಕ್ಕೆ ನನ್ನ ಬೆಂಬಲವಿದೆ ಎಂದು ಹೇಳಿದ್ದಾರೆ.

<><><><>

ರಾಜ್ಯದ ಹಲವೆಡೆ ಮಳೆಯಾಗಿದೆ. ಬೆಂಗಳೂರಿನ ಹಲವೆಡೆ ಸಂಜೆಯ ವೇಳೆಗೆ ಮಳೆಸುರಿಯುತ್ತಿದ್ದು ಜನಜೀವನ ಅಸ್ತವ್ಯಸ್ಥವಾಗಿದೆ. ದಕ್ಷಿಣ ಕನ್ನಡ ಉಡುಪಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರಿನ ಹಲವೆಡೆ ಭಾರೀ ಮಳೆಯಾಗಲಿದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ನಾಳೆಯಿಂದ ಇದೇ ೧೪ ರವರೆಗೆ ಮೂರು ದಿನಗಳ ರೆಡ್ ಅಲರ್ಟ್ ಇದ್ದು, ಗುಡುಗು ಸಿಡಿಲಿನೊಂದಿಗೆ ಕೆಲವು ಪ್ರದೇಶಗಳಲ್ಲಿ ಹೆಚ್ಚಿನ ಗಾಳಿಯಿಂದ ಕೂಡಿದ ಮಳೆಯಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ತಿಳಿಸಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

- ಯಾದಗಿರಿ ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಲ್ಲಿ ಅಧಿಕಾರಿಗಳು ಸಾರ್ವಜನಿಕರ ಕಷ್ಟಗಳಿಗೆ ಸ್ಪಂದಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಶರಣ ಬಸಪ್ಪ ದರ್ಶನಾಪುರ ತಿಳಿಸಿದ್ದಾರೆ.
- ಸಾರ್ವಜನಿಕರ ಅರ್ಜಿ ತ್ವರಿತವಾಗಿ ಮತ್ತು ಕಾಲಮಿತಿಯಲ್ಲಿ ವಿಲೇವಾರಿ ಮಾಡಲು "ಸಕಾಲ್" ಯೋಜನೆ ಜಾರಿಗೊಳಿಸಿದ್ದು, ಇಲ್ಲಿಯೂ ಬಾಕಿ ಇಟ್ಟುಕೊಂಡರೆ ಮುಲಾಜಿಲ್ಲದೆ ಸಂಬಂಧಪಟ್ಟ ಅಧಿಕಾರಿ-ಸಿಬ್ಬಂದಿ ಸಂಬಳದಲ್ಲಿ ಕಡಿತ ಮಾಡಿ ದಂಡ ಪಾವತಿಗೆ ಕ್ರಮ ವಹಿಸಲಾಗುವುದು ಎಂದು ಕಲಬುರ್ಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>